# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 355 |
| ವಿಧಾನ ಪರಿಷತ್ ಸದಸ್ಯರು | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.08.2026 |
| ಉತ್ತರಿಸುವ ಸಚಿವರು | ಉಪ ಮುಖ್ಯಮಂತ್ರಿಗಳು, ಕಂದಾಯ ಹಾಗೂ ಕ್ರೀಡಾ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ಇರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಗ್ರಾಮ ಠಾಣಾ ಕ್ಷೇತ್ರದ ಜೊತೆಗೆ ಹೊಂದಿಕೊಂಡಂತೆ ಬಹುತೇಕ ಎಲ್ಲಾ ಗ್ರಾಮಗಳ ವಸತಿ ಕ್ಷೇತ್ರವು ವಿಸ್ತರಣೆಯಾಗುತ್ತಾ ಬಂದಿದ್ದು, ಸದರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣಾ ಗಡಿಗಳನ್ನು ತುಂಬಾ ಹಿಂದೆಯೇ ನಿಗದಿಪಡಿಸಿದ್ದು; ಗ್ರಾಮಠಾಣಾದ ಅಕ್ಕಪಕ್ಕದಲ್ಲಿ ವಿವಿಧ ವಸತಿ ಯೋಜನೆಗಳಡಿ ಹಕ್ಕುಪತ್ರ ಪಡೆದ ಜನರು ಮನೆ ನಿರ್ಮಾಣ ಮಾಡಿಕೊಂಡಿರುವುದಲ್ಲದೇ ಪಕ್ಕದ ಕೃಷಿ ಭೂಮಿಯಲ್ಲಿ ಕೂಡಾ ಮನೆಗಳನ್ನು ನಿರ್ಮಾಣ ಮಾಡಿಕೊಂಡು ಅವೆಲ್ಲವುಗಳೂ ಅಕ್ರಮಗೊಂಡಿರುವುದರಿಂದ ಈ ಪ್ರದೇಶಗಳು ವಾಸ್ತವವಾಗಿ ಗ್ರಾಮಠಾಣಾ ವ್ಯಾಪ್ತಿಗೆ ಒಳಪಡುತ್ತಿದ್ದು, ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಗ್ರಾಮಠಾಣಾವನ್ನು ನಿಗದಿಪಡಿಸಲು ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳು ಜಂಟಿಯಾಗಿ ಸಭೆ ನಡೆಸಿ, ಸಂಖ್ಯೆ: ಗ್ರಾಅಪ/441/ಗ್ರಾಪಂಅ/2016, ದಿನಾಂಕ:28.10.2016 ರಂದು ಸುತ್ತೋಲೆ ಹೊರಡಿಸಿದ್ದು, ಈ ಸುತ್ತೋಲೆ ಅನ್ವಯ ಇನ್ನೂ ಸೂಕ್ತ ಕ್ರಮ ಕೈಗೊಳ್ಳದೇ ಇರುವುದರಿಂದ ನಾಗರೀಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಗಳಿಂದ ನಮೂನೆ-09 ಮತ್ತು 11ಎ ಪಡೆಯಲು ತುಂಬಾ ತೊಂದರೆ ಅನುಭವಿಸುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಗ್ರಾಮ ಠಾಣಾ ಕ್ಷೇತ್ರದ ಜೊತೆಗೆ ಬೆಳೆದಿರುವ ಜನ ವಸತಿ ಪ್ರದೇಶದ ಗಡಿಯನ್ನು ಹೊಸದಾಗಿ ಸರ್ವೆ ಮಾಡಿಸಿ ಗ್ರಾಮಠಾಣಾ ಪುನರ್ ನಿಗಧಿಪಡಿಸುವ ಬಗ್ಗೆ ಕಂದಾಯ ಇಲಾಖೆ & ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಂದ ಜಂಟಿಯಾಗಿ ದಿನಾಂಕ:28.10.2016ರಂದು ಸುತ್ತೋಲೆ ಹೊರಡಿಸಲಾಗಿರುತ್ತದೆ.<br><br>ಗ್ರಾಮಠಾಣಾದ ಅಕ್ಕಪಕ್ಕದಲ್ಲಿ ವಿವಿಧ ಯೋಜನೆಗಳಡಿ ಹಕ್ಕುಪತ್ರ ಪಡೆದು ಹಾಗೂ ಪಕ್ಕದ ಕೃಷಿ ಭೂಮಿಯಲ್ಲಿ ಜನರು ಮನೆ ನಿರ್ಮಾಣ ಮಾಡಿಕೊಂಡಿರುವ ಬಗ್ಗೆ ಸರ್ಕಾರವು ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮ/ಗ್ರಾಮದ ಭಾಗವಾಗಿ ಪರಿವರ್ತಿಸಿ ಅಲ್ಲಿಯ ನಿವಾಸಿಗಳಿಗೆ ವಾಸದ ಹಕ್ಕು ದಾಖಲೆಗಳನ್ನು ನೀಡುವ ಕುರಿತು ಸುತ್ತೋಲೆ ಸಂಖ್ಯೆ:ಕಂಇ 20 ಸಿಸಿಆರ್ಎ 2019, ದಿನಾಂಕ:15-10-2019 ರನ್ವಯ ಕ್ರಮ ವಹಿಸಲಾಗುತ್ತಿದೆ. ಸದರಿ ಸುತ್ತೋಲೆಯನ್ವಯ ಕರ್ನಾಟಕ ಭೂ ಸುಧಾರಣಾ ಕಾಯ್ದೆ 1961ರ ಕಲಂ 38-ಎ ರನ್ವಯ 02-ಇ ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳು ಕೆಲವು ಷರತ್ತುಗಳನ್ನು ವಿಧಿಸಿ ಜನವಸತಿ ಪ್ರದೇಶವನ್ನು ಗ್ರಾಮಠಾಣವಾಗಿ ಪರಿಗಣಿಸಿ ಅದನ್ನು ಕಂದಾಯ ಗ್ರಾಮ/ಗ್ರಾಮದ ಭಾಗ/ಬಡಾವಣೆ ಆಗಿ ಅಧಿಸೂಚಿಸಲು ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಅಧಿಸೂಚನೆಯಾದ ನಂತರದಲ್ಲಿ ಸದರಿ ಅಧಿಸೂಚನೆ ಆಧರಿಸಿ ಭೂಮಾಪನ ಇಲಾಖೆ ವತಿಯಿಂದ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ. |
| (ಆ) | ಸದರಿ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಯಾವಾಗ ಕ್ರಮ ವಹಿಸಲಾಗುವುದು ಮತ್ತು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು? | ಈಗಾಗಲೇ ಅಳತೆಯಾಗಿ ಸರ್ವೆ ನಂಬರುಗಳನ್ನು ನೀಡಲಾದ ಪ್ರದೇಶವನ್ನು ಗ್ರಾಮಠಾಣಾ ಎಂದು ಪರಿವರ್ತಿಸಲು ಭೂಕಂದಾಯ ಅಧಿನಿಯಮದನ್ವಯ ಅವಕಾಶವಿರುವುದಿಲ್ಲ. ಸರ್ವೆ ನಂಬರುಗಳನ್ನು ನೀಡಲಾದ ಗ್ರಾಮಠಾಣಕ್ಕೆ ಹೊಂದಿಕೊಂಡಿರುವ ಪ್ರದೇಶದಲ್ಲಿ ಮನೆಗಳಿದ್ದರೂ ಅವುಗಳ ಬಳಕೆ ಬದಲಾಗುವುದಿಲ್ಲ. ಗ್ರಾಮಠಾಣ ವಿಸ್ತರಣೆ ಮೂಲಕ |

| | |
|---|---|
| | ಭೂಪರಿವರ್ತನೆಯಾಗದ ಹೊರತು ಭೂ[illegible]ಕ ಬದಲಾವಣೆಗೆ ಕಾನೂನಿನನ್ವಯ ಯಾವುದೇ ವಿನಾಯಿತಿ ದೊರೆಯುವುದಿಲ್ಲ.<br><br>ಮುಂದುವರೆದು, ದಿನಾಂಕ:24-04-2020ರಂದು ಕೇಂದ್ರ ಸರ್ಕಾರದಿಂದ ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಡ್ರೋಣ್ ಆಧಾರಿತ ಸರ್ವೆ ಮೂಲಕ ಹಕ್ಕುದಾಖಲೆಗಳನ್ನು ಸಿದ್ಧಪಡಿಸಿ ವಿತರಿಸುವ ಸ್ವಾಮಿತ್ವ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಅದರಂತೆ ಜನವಸತಿ ಪ್ರದೇಶದ ಎಲ್ಲಾ ಆಸ್ತಿಗಳಿಗೆ ಹಕ್ಕು ದಾಖಲೆಗಳನ್ನು ಸಿದ್ಧಪಡಿಸಿ ವಿತರಿಸಲಾಗುತ್ತಿದೆ |

ಸಂಖ್ಯೆ: ಕಂಇ 200 ಎಸ್‌ಎಸ್‌ಸಿ 2026

(ಡಾ.ಜಿ ಪರಮೇಶ್ವರ)
ಉಪ ಮುಖ್ಯಮಂತ್ರಿ,
ಕಂದಾಯ ಹಾಗೂ ಕ್ರೀಡಾ ಸಚಿವರು